ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಲಯ, ಹುಣಸೂರು

ಸಿ.ಸಿ. 639/2019

ಸಿ.ಡಬ್ಲ್ಯೂ -3, ಪಿ.ಡಬ್ಲ್ಯೂ -2

ದಿಃ **19.03.2025** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

| | |
|---|---|
| ಸಾಕ್ಷಿಯ ಹೆಸರು | ಮನೋಹರ |
| ತಂದೆ/ಗಂಡನ ಹೆಸರು | ನಾಗರಾಜೇಗೌಡ |
| ವಯಸ್ಸು | 42 ವರ್ಷ |
| ಕೆಲಸ | ವ್ಯವಸಾಯ |
| ವಾಸಸ್ಥಳ | ಬಿಳಿಕೆರೆ |

**<u>ಮುಖ್ಯ ವಿಚಾರಣೆ ಮಾನ್ಯ ಎ.ಪಿ.ಪಿ.ಯವರಿಂದ:</u>**

ಪ್ರಕರಣದ ಬಗ್ಗೆ ಮಾಹಿತಿ ಇಲ್ಲ. ಸಾಕ್ಷಿಗೆ ಮಹಜರ್ ನ್ನು ತೋರಿಸಿದ್ದು, ಸಾಕ್ಷಿ ಅದರಲ್ಲಿರುವ ತನ್ನ ಸಹಿ ನೋಡಿ ಗುರುತಿಸಿದ್ದು, ಅದನ್ನು ಈಗಾಗಲೇ ನಿಪಿ-2 ಎಂದು ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು 2(ಬಿ) ಎಂದು ಗುರುತಿಸಲಾಯಿತು. ನಿಪಿ-2 ರಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ಯಾವುದೇ ಮಹಜರ್ ಕ್ರಮ ಕೈಗೊಂಡಿರುವುದಿಲ್ಲ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಅಮಾನತುಪಡಿಸಿಕೊಂಡಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಸ.ಸ.ಅ. ಪಾಟೀ ಸವಾಲು ಮಾಡಲು ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಗಿದೆ.)**

**<u>ಪಾಟೀ ಸವಾಲು ಮಾನ್ಯ ಎ.ಪಿ.ಪಿ ವಕೀಲರಿಂದಃ</u>**

ದಿಃ 10.04.2015 ರಂದು ಪೊಲೀಸರು ಘಟನಾ ಸ್ಥಳಕ್ಕೆ ಬಂದಿದ್ದು, ಅಲ್ಲಿ ಚಾಸಾ- 1 ರವರು ಹಾಜರಿದ್ದು, ಘಟನಾ ಸ್ಥಳವನ್ನು ತೋರಿಸಿದ ಮೇರೆಗೆ ನನ್ನ ಮತ್ತು ಚಾಸಾ-4 ರವರ ಸಮಕ್ಷಮ ಬೆಳಿಗ್ಗೆ 10.30 ರಿಂದ 11.15 ರವರೆಗೆ ನಿಪಿ-2 ರಂತೆ ಮಹಜರ್ ಕ್ರಮ ಕೈಗೊಂಡು, ಸ್ಥಳದಿಂದ ಮು.ಮಾ-1 ನ್ನು ಅಮಾನತ್ತುಪಡಿಸಿಕೊಂಡು, ನಿಪಿ-2 ಕ್ಕೆ ಅಲ್ಲಿಯೇ ನನ್ನ ಸಹಿ ಪಡೆದಿರುತ್ತಾರೆಂದರೆ ಸರಿಯಲ್ಲ.

ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಈ ದಿನ ಉದ್ದೇಶಪೂರ್ವಕವಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ನಿಜವಲ್ಲ.

**ಪಾಟೀಸವಾಲು ಆರೋಪಿ ಪರ ಃ**

ಪಾಟೀಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

**ಮರುವಿಚಾರಣೆ ಇಲ್ಲ.**

ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು.

ಓ ಹೇ ಕೇ ಸರಿ ಇದೆ.

ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ,
ಹುಣಸೂರು.